<u>ಕರ್ನಾಟಕ ವಿಧಾನ ಪರಿಷತ್ತು</u>

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 825 |
| 2 | ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 22–02–2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 5 ವರ್ಷಗಳಲ್ಲಿ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನವೆಷ್ಟು; | • ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸರ್ಕಾರದಿಂದ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ 2021–22ನೇ ಸಾಲಿನಲ್ಲಿ ರೂ.6000 ಕೋಟಿಗಳ ಕ್ರಿಯಾ ಯೋಜನೆಗೆ ಅನುಮೋದನೆಯಾಗಿರುತ್ತದೆ.<br>• ಅಮೃತ ನಗರೋತ್ಥಾನ ಯೋಜನೆಗಾಗಿ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡುತ್ತಿರುವುದಿಲ್ಲ ಆದರೆ, ಸರ್ಕಾರದಿಂದ ಅಮೃತ ನಗರೋತ್ಥಾನ, ನಗರೋತ್ಥಾನ, ವಿಶೇಷ ಮೂಲಭೂತ ಸೌಕರ್ಯ, ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಗಳನ್ನೆಲ್ಲ ಸೇರಿಸಿ ವಿಶೇಷ ಮೂಲಭೂತ ಸೌಕರ್ಯ ಯೋಜನೆಯಡಿ ಅನುದಾನ ಬಿಡುಗಡೆ ಮಾಡಲಾಗಿದೆ.<br>• 2021–22ನೇ ಸಾಲಿನಿಂದ ಸರ್ಕಾರದ ವಿಶೇಷ ಮೂಲಭೂತ ಸೌಕರ್ಯ ಲೆಕ್ಕಶೀರ್ಷಿಕೆಯಡಿ ಬಿಡುಗಡೆಯಾಗಿರುವ ಅನುದಾನದ ವಿವರ ಈ ಕೆಳಕಂಡಂತಿದೆ:<br>(ರೂ.ಕೋಟಿಗಳಲ್ಲಿ)<br>ಕ್ರಸಂ. / ವರ್ಷ / ಬಿಡುಗಡೆಯಾದ ಮೊತ್ತ<br>1 / 2021–22 / 3000<br>2 / 2022–23 / 3500<br>3 / 2023–24 / 3200 |
| ಆ) | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಎಷ್ಟು ಅನುದಾನವನ್ನು ನಿಗಧಿಗೊಳಿಸಲಾಗಿದೆ; ಇದರಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ; | |
| ಇ) | ಸದರಿ ಯೋಜನೆಯಡಿಯಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬರುವ ಎಷ್ಟು ಕೆರೆಗಳನ್ನು ಅಭಿವೃದ್ದಿಪಡಿಸಲಾಗಿದೆ; ಅಭಿವೃದ್ದಿಪಡಿಸಿದ್ದಲ್ಲಿ ಅವುಗಳ ವಿವರ ಮತ್ತು ವೆಚ್ಚ ಮಾಡಲಾದ ಅನುದಾನದ ಮೊತ್ತವೆಷ್ಟು; (ಕಾಮಗಾರಿಗಳ ವಿವರ ಒದಗಿಸುವುದು) | ಸದರಿ ಯೋಜನೆಯಡಿಯಲ್ಲಿ 17 ಹೊಸ ಕೆರೆಗಳನ್ನು ಅಭಿವೃದ್ದಿಪಡಿಸಲಾಗುತ್ತಿದೆ. |

| | | |
|---|---|---|
| ಈ) | ಕೆರೆಗಳ ಅಭಿವೃದ್ದಿ ಕಾರ್ಯಗಳನ್ನು ಬೃಹತ್ ಬೆಂಗಳೂರು ಅಭಿವೃದ್ದಿ ಪ್ರಾಧಿಕಾರ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯವರು ಕೈಗೊಳ್ಳುವುದಾದರೇ, ಕೆರೆ ಸಂರಕ್ಷಣೆ ಹಾಗೂ ಅಭಿವೃದ್ದಿ ಪ್ರಾಧಿಕಾರದ ಕಾರ್ಯಚಟುವಟಿಕೆ ಏನು; | ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ, 2014 ರನ್ವಯ ರಾಜ್ಯಾದ್ಯಂತ ಇರುವ ಎಲ್ಲಾ ಕೆರೆ ನಿಯಂತ್ರಣ (Regulation) ಮೇಲ್ವಿಚಾರಣೆ ಮತ್ತು ಸೂಕ್ತ ನಿರ್ದೇಶನಗಳನ್ನು ನೀಡುವುದು ಒಳಗೊಂಡಂತೆ ಕೆರೆಗಳ ಅಭಿವೃದ್ಧಿ ಮತ್ತು ನಿರ್ವಹಣೆಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಮೇಲ್ಕಂಡ ಕಾಯ್ದೆ ಅನ್ವಯ ಪರಿಶೀಲಿಸಿ ಅನುಮೋದನೆ ನೀಡುವುದು ಪ್ರಾಧಿಕಾರದ ಕಾರ್ಯಚಟುವಟಿಕೆಯಾಗಿರುತ್ತದೆ. |
| ಉ) | ಬೆಂಗಳೂರು ನಗರದಲ್ಲಿ ಇದ್ದ ಕೆರೆಯ ಅಂಗಳಗಳ ಬೆಂಗಳೂರು ಅಭಿವೃದ್ದಿ ಪ್ರಾಧಿಕಾರ ಜಾಗ ಒಳಗೊಂಡಂತೆ ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಊ) | ಬಂದಿದ್ದಲ್ಲಿ; ಇದುವರೆಗೂ ಸರ್ಕಾರ ತೆಗೆದುಕೊಂಡ ಕ್ರಮವೇನು? | ಕೆರೆಗಳ ಸಂರಕ್ಷಣೆಗಾಗಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 38401/2014ರ ದಿನಾಂಕ: 01-08-2023 ಮತ್ತು 04-09-2023 ರ ನಿರ್ದೇಶನದ ಪ್ರಕಾರ ಹಾಗೂ ಸರ್ಕಾರದ ಆದೇಶ ಸಂಖ್ಯೆ: ನಅಇ 250 ಎಂಎನ್‌ವೈ 2018 (ಭಾಗ-3), ದಿನಾಂಕ: 28-08-2023 ರಂತೆ ಕೆರೆಗಳ ಒತ್ತುವರಿಗಳನ್ನು ತೆರವುಗೊಳಿಸಲು 16 ವಾರಗಳ ಕ್ರಿಯಾಯೋಜನೆಯನ್ನು ತಯಾರಿಸಿ ಕ್ರಮವಹಿಸಲಾಗಿದೆ. |

**ಸಂಖ್ಯೆ: ನಅಇ 83 ಎಂಎನ್‌ವೈ 2024 (ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ